ಹುಬ್ಬಳ್ಳಿ ನಗರದಲ್ಲಿರುವ ಶ್ರೀ ಲಕ್ಷ್ಮಿ ಗೃಹ ನಿರ್ಮಾಣ ಸಹಕಾರ ಸಂಘದ - ಅವ್ಯವಹಾರ.

2765: (3775)

ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರದಲ್ಲಿರುವ ಶ್ರೀ ಲಕ್ಷ್ಮಿ ಗೃಹ ನಿರ್ಮಾಣ ಸಹಕಾರ ಸಂಘದ ಆಡಳಿತ ಮಂಡಳಿಯು ಅವ್ಯವಹಾರ ಮಾಡಿರುವುದು ಮತ್ತು ಸಂಘದ ಸದಸ್ಯರಿಗೆ ಮೋಸ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎಸ್.ಪಾಟೀಲ್ (ಸಹಕಾರ ಸಚಿವರು):

ಅ) ಬಂದಿದೆ.

ಆ) ಆಡಳಿತ ಮಂಡಳಿಯ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದ್ದು ಕರ್ನಾಟಕ ಸಹಕಾರ ಸಂಘಗಳ ಕಾಯಿದೆ 1959ರ ಕಲಂ 30(1) ರಡಿಯಲ್ಲಿ ಸದರಿ ಸಂಘದ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲಾಗಿದೆ. ಆಡಳಿತಾಧಿಕಾರಿಯು ದಿ: 30-10-1998ರಂದು ಪ್ರಭಾರ ವಹಿಸಿಕೊಂಡಿರುತ್ತಾರೆ.

ಕಳ್ಳಂಬೆಳ್ಳ ಕ್ಷೇತ್ರದಲ್ಲಿ ಮಳೆಯ ಹಾನಿಯಿಂದಾಗಿರುವವರಿಗೆ ಮನೆಗಳ ನಿರ್ಮಾಣ.

2766: (3760)

ಶ್ರೀ ಡಿ.ಬಿ.ಜಯಚಂದ್ರ (ಕಳ್ಳಂಬೆಳ್ಳ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಕಳ್ಳಂಬೆಳ್ಳ ಕ್ಷೇತ್ರದ ವ್ಯಾಪ್ತಿಯಲ್ಲಿ 600 ಕ್ಕೂ ಹೆಚ್ಚು ಮನೆಗಳು ಮಳೆಯ ಹಾನಿಯಿಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಭಾಗಶಃ ಮನೆಗಳು ಬಿದ್ದಿರುವುದರಿಂದ ವಾಸಿಸಲು ಯೋಗ್ಯವಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?